ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

10

ಶಾಖೆ / ವಿಷಯ : DEPARTMENT / SUBJECT: ಕೋವಿಡ್ -(ಶಾಸಕರು)

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 9/7/2020

# ಶಾಸಕ ರಾಜೇಗೌಡಗೆ ದೃಢ; ಶಾಸಕ ಮತ್ತಿಮ್ಡುಡ್‌ಗೆ ಭೀತಿ

9/7/20

ಚಿಕ್ಕಮಗಳೂರು/ಕಲಬುರಗಿ: ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಪದಗ್ರಹಣದಲ್ಲಿ ಭಾಗವಹಿಸಿದ್ದ ಶೃಂಗೇರಿ ಕ್ಷೇತ್ರ ಶಾಸಕ ಟಿ.ಡಿ. ರಾಜೇಗೌಡ ಅವರಲ್ಲಿ ಸೋಂಕು ಕಾಣಿಸಿದೆ. ಪ್ರಾಥಮಿಕ ತಪಾಸಣೆಯಲ್ಲಿ ಸೋಂಕಿರುವುದು ಕಾಣಿಸಿಕೊಂಡಿದ್ದರಿಂದ ಅವರನ್ನು ಬುಧವಾರ ರಾತ್ರಿ ಜಿಲ್ಲಾ ಕೋವಿಡ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಇನ್ನು ಕಲಬುರಗಿ ಅಫಜಲ್ಪುರ ತಾಲೂಕಿನ ಜಿಲ್ಲಾ ಪಂಚಾಯಿತಿ ಸದಸ್ಯರೊಬ್ಬರ ಪುತ್ರನಿಗೆ ಕೊರೋನಾ ಸೋಂಕು ದೃಢವಾಗಿದ್ದು ಇವರೊಂದಿಗೆ ಬೆಂಗಳೂರು– ಕಲಬುರಗಿ ಪ್ರಯಾಣ ಮಾಡಿರುವ ಕಲಬುರಗಿ ಗ್ರಾಮೀಣ ಮತಕ್ಷೇತ್ರದ ಶಾಸಕ ಬಸವರಾಜ ಮತ್ತಿಮುಡ್ ಅವರಿಗೂ ಭೀತಿ ಕಾಡತೊಡಗಿದೆ.